# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 350
ಸದಸ್ಯರ ಹೆಸರು : ಶ್ರೀ ಎನ್.ಎಸ್. ಬೋಸ್ ರಾಜು
ಉತ್ತರಿಸಬೇಕಾದ ಸಚಿವರು : ಸಾರಿಗೆ ಸಚಿವರು
ಉತ್ತರಿಸಬೇಕಾದ ದಿನಾಂಕ : 18-07-2019

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಯಚೂರು ನಗರದಲ್ಲಿ ನಗರ ಬಸ್ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು: | ರಾಯಚೂರು ನಗರದಲ್ಲಿನ ಬಸ್ ಘಟಕ-1ರ ನಿವೇಶನವು ನಗರದ ಹೃದಯ ಭಾಗದಲ್ಲಿದ್ದು, ಕೇಂದ್ರ ಬಸ್ ನಿಲ್ದಾಣದ ಮುಂಭಾಗದಲ್ಲಿದೆ. ಸದರಿ ನಿವೇಶನದಲ್ಲಿ ನಗರ ಸಾರಿಗೆ ಬಸ್ ನಿಲ್ದಾಣವನ್ನು ನಿರ್ಮಿಸಲು ಸೂಕ್ತವಾಗಿದ್ದು, ಸದರಿ ಕಾಮಗಾರಿಯನ್ನು 2019-20ನೇ ಸಾಲಿನ ಕ್ರಿಯಾ ಯೋಜನೆಯಡಿಯಲ್ಲಿ ಅಳವಡಿಸಲಾಗಿದ್ದು, ಮಂಜೂರಾತಿ ಪ್ರಕ್ರಿಯೆ ಜಾರಿಯಲ್ಲಿದೆ. |
| (ಆ) | ರಾಯಚೂರು ನಗರದಲ್ಲಿರುವ ಪ್ರಸ್ತುತ ಬಸ್ ನಿಲ್ದಾಣವನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಯಚೂರು ನಗರದಲ್ಲಿರುವ ಪ್ರಸ್ತುತ ಬಸ್ ನಿಲ್ದಾಣವನ್ನು 2016ನೇ ಸಾಲಿನಲ್ಲಿ ನಿರ್ಮಿಸಿ ಕಾರ್ಯಾಚರಣೆಗೊಳಿಸಲಾಗಿದೆ. ಪ್ರಸ್ತುತ ಸದರಿ ಬಸ್ ನಿಲ್ದಾಣದ ಬಾಕಿ ಆವರಣಕ್ಕೆ ಕಾಂಕ್ರೀಟ್ ಅಳವಡಿಸುವುದು ಹಾಗೂ ಪ್ರಯಾಣಿಕರ ಇಳಿಯುವ ಪ್ಲಾಟಫಾರಂ ನಿರ್ಮಿಸುವುದು ಇತ್ಯಾದಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ. |
| (ಇ) | ಮಾನ್ವಿ ಪಟ್ಟಣದಲ್ಲಿ ಬಸ್ ಘಟಕ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಮಾನ್ವಿ ಪಟ್ಟಣದಲ್ಲಿ ಬಸ್ ಘಟಕವನ್ನು ನಿರ್ಮಿಸುವುದಕ್ಕೆ ತೋಟಗಾರಿಕೆ ಇಲಾಖೆಯಿಂದ ಸರ್ವೇ ನಂ.421 ರಲ್ಲಿ 5 ಎಕರೆ ನಿವೇಶನದಲ್ಲಿ ನೂತನ ಬಸ್ ಘಟಕವನ್ನು ನಿರ್ಮಿಸಲು 2019-20ನೇ ಸಾಲಿನ ವಿಶೇಷ ಅಭಿವೃದ್ಧಿ ಯೋಜನೆಯ ಕ್ರಿಯಾ ಯೋಜನೆಯಲ್ಲಿ ಅಳವಡಿಸಲಾಗಿದ್ದು, ಕಾಮಗಾರಿಗೆ ಮಂಜೂರಾತಿ ನೀಡಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ. |
| (ಈ) | ನೈರುತ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ಚಾಲಕ ಹಾಗೂ ಚಾಲಕ-ಕಂ-ನಿರ್ವಾಹಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು. | ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ಚಾಲಕ ಹಾಗೂ ಚಾಲಕ-ಕಮ್-ನಿರ್ವಾಹಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಟಿಡಿ 29 ಟಿಸಿಕ್ಯೂ 2019

(ಡಿ.ಸಿ.ತಮ್ಮಣ್ಣ)
ಸಾರಿಗೆ ಸಚಿವರು